# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತದಡಿ ಕೊಡಗು ಜಿಲ್ಲೆಯ ಸೋಮವಾರಪೇಟೆ, ಮಡಿಕೇರಿ ಮತ್ತು ವಿರಾಜಪೇಟೆ ತಾಲ್ಲೂಕಿನ ಗ್ರಾಮಗಳ ಆಯ್ಕೆ ಅನುಮೋದನೆ ಕುರಿತು.

ಓದಲಾಗಿದೆ: 1.ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:29.06.2012
2.ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:04.07.2012
3.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು ಇವರ ಪತ್ರ ಸಂಖ್ಯೆ:ಕೊಜಿಪಂ:ಅಭಿ-5-ಸುಗ್ರಾಯೋ-18:2012-13 ದಿ:06.08.2012.

ಪ್ರಸ್ತಾವನೆ:

2012-13ನೇ ಸಾಲಿನ ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 5ನೇ ಹಂತದ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ, ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ (1) ಮತ್ತು (2)ರ ಸರ್ಕಾರದ ಆದೇಶ ಹಾಗೂ ಸುತ್ತೋಲೆಯನ್ನು ಹೊರಡಿಸಲಾಗಿದೆ. ಅದರನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗುರವರು ನಿಯಮಾನುಸಾರ ಶಾಸಕರ ಶಿಫಾರಸಿನೊಂದಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಂದ ಅನುಮೋದಿಸಲ್ಪಟ್ಟ ಸೋಮವಾರಪೇಟೆ ತಾಲ್ಲೂಕಿನ 7 ಗ್ರಾಮಗಳು, ವಿರಾಜಪೇಟೆ ತಾಲ್ಲೂಕಿನ 8 ಗ್ರಾಮಗಳು ಮತ್ತು ಮಡಿಕೇರಿ ತಾಲ್ಲೂಕಿನ 9 ಗ್ರಾಮಗಳು ಸೇರಿ ಒಟ್ಟು 24 ಗ್ರಾಮಗಳ ಪಟ್ಟಿಯನ್ನು ಅನುಮೋದನೆ ನೀಡಲು ಓದಲಾಗಿದೆ (3)ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ನಿಯಮಗಳನ್ವಯ ಪರಿಶೀಲಿಸಿದ್ದು, ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ ಸೋಮವಾರಪೇಟೆ ತಾಲ್ಲೂಕಿನ 7 ಗ್ರಾಮಗಳು, ವಿರಾಜಪೇಟೆ ತಾಲ್ಲೂಕಿನ 8 ಗ್ರಾಮಗಳು ಮತ್ತು ಮಡಿಕೇರಿ ತಾಲ್ಲೂಕಿನ 9 ಗ್ರಾಮಗಳು ಸೇರಿ ಒಟ್ಟು 24 ಗ್ರಾಮಗಳಲ್ಲಿ ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:64:ಸುಗ್ರಾಯೋ:2012. ಬೆಂಗಳೂರು, ದಿನಾಂಕ:23.08.2012**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಕೊಡಗು ಜಿಲ್ಲೆಯ 3 ತಾಲ್ಲೂಕುಗಳ 24 ಗ್ರಾಮಗಳಿಗೆ ಅನುಬಂಧದಲ್ಲಿ ನಮೂದಿಸಿರುವಂತೆ ಸದರಿ ಗ್ರಾಮಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಓದಲಾಗಿದೆ (1)ರ ಸರ್ಕಾರಿ ಆದೇಶದಲ್ಲಿ ಹಾಗೂ ಓದಲಾಗಿದೆ (2)ರ ಸುತ್ತೋಲೆಯಲ್ಲಿ ಹೊರಡಿಸಲಾದ ಯೋಜನಾ ಮಾರ್ಗಸೂಚಿ ಪ್ರತಿ ಗ್ರಾಮಕ್ಕೆ ಸಂಬಂಧಿಸಿದಂತೆ ಸಮಗ್ರ ಅಭಿವೃದ್ಧಿ ಯೋಜನೆಯನ್ನು ರೂಪಿಸಿ ಅನುಮೋದನೆ ನೀಡಿ ಕಾರ್ಯಗತಗೊಳಿಸುವುದು.
2. ಈ ಸರ್ಕಾರಿ ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ–1ರಲ್ಲಿ ಸೂಚಿಸಿದ ತಾಲ್ಲೂಕುವಾರು ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ ಕಾರ್ಯಕ್ರಮವನ್ನು ಕೈಗೊಳ್ಳುವುದು.
3. ಗ್ರಾಮವಾರು ಅನುದಾನವನ್ನು ನಿಗದಿಪಡಿಸುವಾಗ ಗ್ರಾಮದ ಜನಸಂಖ್ಯೆಗನುಗುಣವಾಗಿ ತಲಾನುದಾನ ನಿಯಮಕ್ಕೆ ತಕ್ಕಂತೆ ನಿಗದಿಪಡಿಸಿಕೊಳ್ಳತಕ್ಕದ್ದು.
4. ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ–2ರ ವೇಳಾಪಟ್ಟಿಗನುಗುಣವಾಗಿ ಕಾರ್ಯಾನುಷ್ಠಾನ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು(ಸು.ಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಡಗು.
2. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಕೊಡಗು.
3. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಉಪ ಮುಖ್ಯ ಮಂತ್ರಿ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು.
6. ಸಂಕಲನಕಾರರು, ರಾಜ್ಯಪತ್ರ, ಬೆಂಗಳೂರು.
7. ಮಹಾಲೇಖಪಾಲರು, ಬೆಂಗಳೂರು.
8. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪ. ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಸಂಪಾದಕರು, ಕರ್ನಾಟಕ ವಿಕಾಸ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
10. ಹೆಚ್ಚುವರಿ.

# ಅನುಬಂಧ

**ಕೊಡಗು ಜಿಲ್ಲೆಯ 5ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಅಭಿವೃದ್ಧಿಗೊಳಿಸಿರುವ ಗ್ರಾಮಗಳು**

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:64:ಸುಗ್ರಾಯೋ:2012, ದಿನಾಂಕ:23.08.2012**

**ಜಿಲ್ಲೆ: ಕೊಡಗು**

| ಕ್ರ.ಸಂ. | ತಾಲ್ಲೂಕು | ಗ್ರಾಮ ಪಂಚಾಯತಿ ಹೆಸರು | ಗ್ರಾಮಗಳ ಹೆಸರು | 2001ರ ಜನಗಣತಿ ಪ್ರಕಾರ ಜನಸಂಖ್ಯೆ | ನಿಗದಿಪಡಿಸಬೇಕಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|---|
| 1 | ಸೋಮವಾರ ಪೇಟೆ | ಹರದೂರು | ಹರದೂರು | 4383 | 104.88 |
| | | ಸುಂಟಿಕೊಪ್ಪ | ಸುಂಟಿಕೊಪ್ಪ | 3488 | 83.46 |
| | | ಚೆಟ್ಟಳ್ಳಿ | ಚೇರಳ ಶ್ರೀಮಂಗಲ | 4781 | 114.40 |
| | | ಶನಿವಾರಸಂತೆ | ಶನಿವಾರಸಂತೆ | 4420 | 105.77 |
| | | ಕೂಡುಮಂಗಳೂರು | ಕೂಡುಮಂಗಳೂರು | 1590 | 38.04 |
| | | | ಬಸವನತ್ತೂರು | 1091 | 26.10 |
| | | ಶಿರಂಗಾಲ | ಶಿರಂಗಾಲ | 2479 | 59.35 |
| | | | ಒಟ್ಟು | **22232** | 532.00 |
| 2 | ವಿರಾಜಪೇಟೆ | ಚೆನ್ನಯ್ಯನಕೋಟೆ | ಚೆನ್ನಯ್ಯನಕೋಟೆ | 6946 | 173.65 |
| | | ಹೊಸೂರು | ಹೊಸೂರು | 3670 | 91.75 |
| | | | ಬೆಟ್ಟಗೇರಿ | 684 | 17.29 |
| | | ಕಿರುಗೂರು | ಕಿರುಗೂರು | 1664 | 41.60 |
| | | | ಮತ್ತೂರು | 3387 | 84.67 |
| | | ನಿಟ್ಟೂರು | ನಿಟ್ಟೂರು | 2181 | 54.52 |
| | | | ಕೊಟ್ಟಗೇರಿ ಗ್ರಾಮ | 972 | 24.30 |
| | | ಪೊನ್ನಪ್ಪಸಂತೆ | ಬೆಸಗೂರು | 929 | 23.22 |
| | | | ಒಟ್ಟು | **20433** | **511.00** |
| 3 | ಮಡಿಕೇರಿ | ಮುಕ್ಕಂದೂರು | ಮುಕ್ಕಂದೂರು | 1758 | 44.16 |
| | | | ಮುಕ್ಕೋಡ್ಲು | 930 | 23.36 |
| | | ಭಾಗಮಂಡಲ | ಭಾಗಮಂಡಲ | 2149 | 53.98 |
| | | | ತಣ್ಣಿಮಾನಿ | 893 | 22.43 |
| | | | ಅಯ್ಯಂಗೇರಿ | 1680 | 42.20 |
| | | | ಸಣ್ಣ ಪುಲಿಕೋಟು | 576 | 14.44 |
| | | ಬೇಂಗೂರು | ಚೇರಂಬಾಣೆ | 1433 | 35.99 |
| | | | ಬಿ.ಬಾಡಗ | 765 | 19.27 |
| | | | ಕೊಳಗದಾಳು | 2315 | 58.15 |
| | | | ಒಟ್ಟು | **12499** | **314.00** |
| | | | ಜಿಲ್ಲೆಯ ಒಟ್ಟು ಮೊತ್ತ | **55164** | **1357.00** |

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು(ಸು.ಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ